**Akashvani : Bangalore**
**Regional Bulletin In Kannada**
**11.02.2025 / 18.40 hrs**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
**11.02.2025 / 18.40 hrs**
**<><*<><>*><>**

ಮುಖ್ಯಾಂಶಗಳು

**೧. ಬೆಂಗಳೂರಿನಲ್ಲಿ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶ : ರಕ್ಷಣಾ ಸಚಿವ ರಾಜನಾಥ್ ಸಿಂಗ್ ಚಾಲನೆ**

**೨. ಏರೋ ಇಂಡಿಯಾ - ೨೦೨೫ ; ವಿವಿಧ ರಾಷ್ಟ್ರಗಳೊಂದಿಗೆ ವೈಮಾನಿಕ ಹಾಗೂ ರಕ್ಷಣಾ ಕ್ಷೇತ್ರಗಳ ಮಹತ್ವದ ಒಪ್ಪಂದಕ್ಕೆ ಸಹಿ**

**೩. ಮೆಟ್ರೋ ಪ್ರಯಾಣ ದರ ಏರಿಕೆ ಬಗ್ಗೆ ಸ್ಪಷ್ಟನೆ ನೀಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ; ಸಂಸತ್‌ನಲ್ಲಿ ಧ್ವನಿ ಎತ್ತಿದ ಸಂಸದ ತೇಜಸ್ವಿ ಸೂರ್ಯ**

**೪. ಮೈಸೂರಿನ ಉದಯಗಿರಿಯಲ್ಲಿ ಪರಿಸ್ಥಿತಿ ಶಾಂತ ; ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸ್ಪಷ್ಟನೆ**

**<><*<><>*><>**

ಬೆಂಗಳೂರಿನ ಅರಮನೆ ಮೈದಾನದಲ್ಲಿ ಜಾಗತಿಕ ಹೂಡಿಕೆದಾರರ ಸಮಾವೇಶ ಇನ್ವೆಸ್ಟ್ ಕರ್ನಾಟಕ - ೨೦೨೫ಕ್ಕೆ ಚಾಲನೆ ದೊರೆತಿದೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ಸಮಾವೇಶಕ್ಕೆ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ರಾಜನಾಥ್ ಸಿಂಗ್, ಅಭಿವೃದ್ಧಿ ಮತ್ತು ಯಶಸ್ಸಿಗೆ ಕರ್ನಾಟಕ ಉತ್ತಮ ಅಡಿಪಾಯ ಒದಗಿಸಲಿದೆ. ಕರ್ನಾಟಕದಲ್ಲಿ ಹೂಡುವ ಬಂಡಾವಳ ದೇಶದ ಅಭಿವೃದ್ಧಿಗೂ ಪೂರಕವಾಗಲಿದೆ ಎಂದು ತಿಳಿಸಿದ್ದಾರೆ.

**ಧ್ವನಿ : ರಾಜನಾಥ್ ಸಿಂಗ್ ( ೪೫ ಸೆಕೆಂಡ್ಸ್)**

ಸಮಾವೇಶದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಸೇರಿದಂತೆ ಹಲವು ಸಚಿವರು, ಉದ್ಯಮಿಗಳು ಉಪಸ್ಥಿತರಿದ್ದರು.

**<><*<><>*><>**

ಭಯೋತ್ಪಾದನೆ, ಸೈಬರ್ ಅಪರಾಧಗಳಿಂದ ಹಿಡಿದು ಹವಾಮಾನ ವಿಪತ್ತುಗಳವರೆಗೆ ಎದುರಿಸುತ್ತಿರುವ ಸವಾಲುಗಳು ಗಡಿಗಳನ್ನು ಮೀರಿವೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ತಿಳಿಸಿದ್ದಾರೆ. ಏರೋ ಇಂಡಿಯಾ ೨೦೨೫ ರಲ್ಲಿ ಇಂದು ನಡೆದ ವಿವಿಧ ದೇಶಗಳ ರಕ್ಷಣಾ ಸಚಿವರ ಸಮ್ಮೇಳನದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಭಾರತವು ಅತ್ಯಾಧುನಿಕ ರಕ್ಷಣಾ ಉಪಕರಣಗಳು ಹಾರ್ಡ್‌ವೇರ್, ಸೇವೆಗಳು ಹಾಗೂ ತಂತ್ರಜ್ಞಾನವನ್ನು

ಪಾಲುದಾರ ರಾಷ್ಟ್ರಗಳೊಂದಿಗೆ ಹಂಚಿಕೊಳ್ಳಲು ಬದ್ಧವಾಗಿದೆ ಎಂದು ಹೇಳಿದ್ದಾರೆ. ಏರೋ ಇಂಡಿಯಾ - ೨೦೨೫ರ ೨ನೇ ದಿನವಾದ ಇಂದು ಬಾನಂಗಳದಲ್ಲಿ ವಿವಿಧ ಯುದ್ಧ ವಿಮಾನಗಳು ತಮ್ಮ ಸಾಮರ್ಥ್ಯ ಹಾಗೂ ಕಸರತ್ತು ಪ್ರದರ್ಶಿಸಿದವು. ಈ ನಡುವೆ ಆದಾನಿ ಡಿಫೆನ್ಸ್ ಅಂಡ್ ಏರೋಸ್ಪೇಸ್ ಮತ್ತು ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ ಸಹಯೋಗದೊಂದಿಗೆ ಅತ್ಯಾಧುನಿಕ ಮೌಂಟೆಡ್ ಕೌಂಟರ್ ಡ್ರೋನ್ ವ್ಯವಸ್ಥೆಯನ್ನು ಅನಾವರಣಗೊಳಿಸಲಾಯಿತು. ವೈಮಾನಿಕ ಬೆದರಿಕೆಗಳ ವಿರುದ್ಧ ಭಾರತದ ರಕ್ಷಣಾ ಸನ್ನದ್ಧತೆಯನ್ನು ಹೆಚ್ಚಿಸುವಲ್ಲಿ ಈ ಡ್ರೋನ್ ಕಾರ್ಯನಿರ್ವಹಿಸಲಿದೆ. ಈ ನಡುವೆ ರಾಜ್ಯ ಸರ್ಕಾರ ಆಯೋಜಿಸಿದ ವಿಚಾರ ಸಂಕಿರಣದಲ್ಲಿ ಹೂಡಿಕೆ ಅವಕಾಶಗಳು, ಮೂಲಸೌಕರ್ಯ ಮತ್ತು ರಕ್ಷಣಾ ವಲಯದ ಭವಿಷ್ಯದಲ್ಲಿ ರಾಜ್ಯದ ಕಾರ್ಯತಂತ್ರದ ಪಾತ್ರವನ್ನು ಉದ್ಯಮಿಗಳು ಪ್ರತಿಪಾದಿಸಿದರು.

<><*<><>*><>

ಬೆಂಗಳೂರಿನಲ್ಲಿ ನಡೆಯುತ್ತಿರುವ ಏರೋ ಇಂಡಿಯಾ - ೨೦೨೫ ಭಾರತದ ನವರತ್ನ ಕಂಪನಿಯಾದ ಭಾರತ್ ಎಲೆಕ್ಟ್ರಾನಿಕ್ಸ್ ಲಿಮಿಟೆಡ್ - ಬಿಇಎಲ್ ಹಾಗೂ ಇಸ್ರೇಲ್ ಏರೋಸ್ಪೇಸ್ ಇಂಡ್ರಸ್ಟ್ರೀಸ್ ಇಂದು ಮಹತ್ವದ ಒಪ್ಪಂದಕ್ಕೆ ಸಹಿ ಹಾಕಿವೆ. ಇದು ಭಾರತ-ಇಸ್ರೇಲ್ ರಕ್ಷಣಾ ಮತ್ತು ಭದ್ರತಾ ಸಹಕಾರದಲ್ಲಿ ಹೊಸ ಅಧ್ಯಯಕ್ಕೆ ನಾಂದಿ ಹಾಡಿದೆ. ಇದೇ ವೇಳೆ ಮಾತನಾಡಿದ ಇಸ್ರೇಲ್ ಏರೋಸ್ಪೇಸ್ ಇಂಡ್ರಸ್ಟ್ರೀಸ್ ಅಧ್ಯಕ್ಷ ಬೋಜ್‌ಲೆವಿ ಮಾತನಾಡಿ, ಇದು ಇಸ್ರೇಲ್ ಮತ್ತು ಭಾರತದ ಪ್ರಮುಖ ರಕ್ಷಣಾ ಸಂಸ್ಥೆಗಳು ಸ್ಥಾಪಿಸಿದ ಮೊಟ್ಟಮೊದಲ ಜಂಟಿ ಕಂಪನಿಯಾಗಿದೆ ಎಂದು ತಿಳಿಸಿದ್ದಾರೆ. ಇದೇ ವೇಳೆ ಬಿಇಎಲ್ ಬೆಂಗಳೂರಿನ ಸಿಎಸ್‌ಐಆರ್ ನ್ಯಾಷನಲ್ ಏರೋ ಸ್ಪೇಸ್ ಲ್ಯಾಬೊರೊಟರೀಸ್‌ನೊಂದಿಗೆ ಮಹತ್ವದ ಒಪ್ಪಂದಕ್ಕೆ ಸಹಿ ಹಾಕಿದೆ. ಏಕೀಕೃತ ವಿಮಾನಯಾನ ಆಡಳಿತ ನಿರ್ವಹಣೆ ಮತ್ತು ಸೆನ್ಸರ್ ಅಭಿವೃದ್ಧಿ ಕುರಿತಂತೆ ಉಭಯ ಸಂಸ್ಥೆಗಳು ಕಾರ್ಯ ನಿರ್ವಹಿಸಲಿವೆ.

<><*<><>*><>

ಮೆಟ್ರೋ ದರ ಏರಿಕೆ ಕುರಿತಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ ನೀಡಿದ್ದು, ಎಲ್ಲ ಗೊಂದಲಕ್ಕೆ ತೆರೆ ಎಳೆದಿದ್ದಾರೆ. ದರ ಏರಿಕೆ ಬಗ್ಗೆ ಮಾಧ್ಯಮ ಪ್ರಕಟಣೆ ಹೊರಡಿಸಿರುವ ಸಿದ್ದರಾಮಯ್ಯ ಬೆಂಗಳೂರು ಮೆಟ್ರೋ ರೈಲು ನಿಗಮದಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಸಮ ಪಾಲುದಾರಿಕೆ ಇದೆ ಎಂದು ತಿಳಿಸಿದ್ದಾರೆ. ಇದರಲ್ಲಿ ರಾಜಕೀಯ ಮಾಡುತ್ತಿರುವ ಬಿಜೆಪಿ ನಾಯಕರ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಮೆಟ್ರೋ ದರ ಪರಿಷ್ಕರಣಾ ಸಮಿತಿ ನೀಡಿದ ವರದಿ ಆಧರಿಸಿ ದರ ಏರಿಕೆ ಮಾಡಲಾಗಿದೆ. ಬೆಂಗಳೂರು ಮೆಟ್ರೋ ಪ್ರಯಾಣ ದರ ಕನಿಷ್ಠ ೧೦, ಗರಿಷ್ಠ ೯೦ ರೂಪಾಯಿಯಾಗಿದೆ. ಮುಂಬೈ ಮೆಟ್ರೋ ರೈಲಿನ ದರ ಕನಿಷ್ಠ ೧೦, ಗರಿಷ್ಠ ೮೦ ಆಗಿದೆ. ಮೆಟ್ರೋ ರೈಲ್ವೆ ಕಾಯ್ದೆಯ ಸೆಕ್ಷನ್ ೩೭ರ ಪ್ರಕಾರ ಪ್ರಯಾಣ ದರ ನಿಗದಿ ಸಮಿತಿ ನೀಡಿದ ವರದಿಯನ್ನು ಮೆಟ್ರೋ ರೈಲು ನಿಗಮಗಳು ಕಡ್ಡಾಯವಾಗಿ ಅನುಷ್ಠಾನಗೊಳಿಸಬೇಕಾಗಿದೆ ಎಂದು ಮುಖ್ಯಮಂತ್ರಿ ಸ್ಪಷ್ಟನೆ ನೀಡಿದ್ದಾರೆ.

<><*<><>*><>

ಬೆಂಗಳೂರು ದಕ್ಷಿಣ ಸಂಸದ ತೇಜಸ್ವಿ ಸೂರ್ಯ ಲೋಕಸಭೆಯಲ್ಲಿಂದು ಮೆಟ್ರೋ ದರ ಏರಿಕೆಯ ವಿರುದ್ಧ ಧ್ವನಿ ಎತ್ತಿದ್ದಾರೆ. ಶೂನ್ಯ ವೇಳೆಯಲ್ಲಿ ವಿಷಯ ಪ್ರಸ್ತಾಪಿಸಿ ಕಡಿಮೆ ಅಂತರದ ಪ್ರಯಾಣ ಮಾಡುವವರು ದ್ವಿಗುಣ ಹಣ ಪಾವತಿಸುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಮೆಟ್ರೋ ಬೆಲೆ ಏರಿಕೆ ಮಧ್ಯಮವರ್ಗದ ಜನರ ಮೇಲೆ ಗಂಭೀರ ಪರಿಣಾಮ ಬೀರಿದ್ದು, ಕಡಿಮೆ ಅಂತರದ ಪ್ರಯಾಣ ಮಾಡುವವರಿಗೂ ಶೇಕಡ ೧೦೦ರಷ್ಟು ದರ

ಏರಿಕೆಯಾಗಿದೆ. ಮೆಟ್ರೋ ಸಂಪರ್ಕವಿರುವ ನಗರಗಳಲ್ಲಿ ಬೆಂಗಳೂರು ಮೆಟ್ರೋ ದುಬಾರಿಯಾಗಿದೆ. ಸಮಾನ್ಯ ಜನರಿಗೆ ಕೈಗೆಟಕುವ ದರ ನಿಗದಿ ಪಡಿಸುವಂತೆ ಅವರು ಒತ್ತಾಯಿಸಿದ್ದಾರೆ.

**<><*<><>*><>**

ಮೈಸೂರಿನ ಉದಯಗಿರಿ ಪೊಲೀಸ್ ಠಾಣೆ ಮೇಲೆ ಕಲ್ಲು ತೂರಾಟ ನಡೆಸಿದವರನ್ನು ಬಂಧಿಸಿ, ಕಾನೂನು ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದ ಆರೋಪಿಯನ್ನು ಪೊಲೀಸರು ಬಂಧಿಸಿದ್ದರು. ಆತನನ್ನು ವಶಕ್ಕೆ ನೀಡುವಂತೆ ಠಾಣೆ ಬಳಿ ಬಂದು ಕೆಲವರು ಗಲಾಟೆ ನಡೆಸಿದ್ದಾರೆ. ಪೊಲೀಸರು ಅಶ್ರುವಾಯು ಸಿಡಿಸಿ, ನಿಯಂತ್ರಣಕ್ಕೆ ತೆಗೆದುಕೊಂಡಿದ್ದಾರೆ ಎಂದು ಹೇಳಿದ್ದಾರೆ. ಪರಿಸ್ಥಿತಿ ಈಗ ನಿಯಂತ್ರಣದಲ್ಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

**<><*<><>*><>**

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಆರೋಪಿಸಿದ್ದಾರೆ. ಮೈಸೂರಿನಲ್ಲಿ ಉದಯಗಿರಿ ಪೊಲೀಸ್ ಠಾಣೆಗೆ ಭೇಟಿ ನೀಡಿದ ಅವರು, ಪೊಲೀಸರಿಂದ ಮಾಹಿತಿ ಪಡೆದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿ, ಕಲ್ಲು ತೂರಾಟ ನಡೆಸಿದವರನ್ನು ಕೂಡಲೇ ಪೊಲೀಸರು ಬಂಧಿಸಬೇಕು ಎಂದು ಒತ್ತಾಯಿಸಿದ್ದಾರೆ.

**ಧ್ವನಿ : ಆರ್. ಅಶೋಕ (೩೦ ಸೆಕೆಂಡ್ಸ್)**

**<><*<><>*><>**

ಚಿತ್ರದುರ್ಗ ಜಿಲ್ಲೆಯಲ್ಲಿ ನಾಲ್ಕು ಕೋಟಿ ವೆಚ್ಚದಲ್ಲಿ ರ್‍ಯಾಡ್ ರ್‍ಯಾಫ್ಟರ್ ಯೋಜನೆ ಅನುಷ್ಠಾನ ಮಾಡಿ ೬೦ ಗ್ರಾಮಗಳಲ್ಲಿ ಹಸು ಖರೀದಿಸಲು ೨೦ ಸಾವಿರ ಸಬ್ಸಿಡಿ ನೀಡಲಾಗಿದೆ ಎಂದು ಕೃಷಿ ಸಚಿವ ಚಲುವರಾಯ ಸ್ವಾಮಿ ತಿಳಿಸಿದ್ದಾರೆ. ಚಿತ್ರದುರ್ಗದಲ್ಲಿ ಕೃಷಿ ಸಂಬಂಧಿತ ವಲಯದ ಅಭಿವೃದ್ಧಿ ಮತ್ತು ಪುನುಶ್ಚೇತನ ಯೋಜನೆಯ ಫಲಾನುಭವಿಗಳ ಜೊತೆ ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಮಳೆ ಕಡಿಮೆ ಪ್ರದೇಶಕ್ಕೆ ಉಪಯೋಗವಾಗುವಂತೆ ಈ ಯೋಜನೆಯನ್ನು ರೂಪಿಸಲಾಗಿದೆ ಎಂದು ಹೇಳಿದ್ದಾರೆ. ರೈತರು ಕೃಷಿಯನ್ನು ಮಾತ್ರ ಅವಲಂಬಿಸದೆ, ಹಸು ಸಾಕಾಣಿಕೆ ಮಾಡಿ ಕುಟುಂಬದ ಆರ್ಥಿಕ ಪರಿಸ್ಥಿತಿಯನ್ನು ಉತ್ತಮಪಡಿಸಿಕೊಳ್ಳಬಹುದು ಎಂದು ಸಲಹೆ ನೀಡಿದ್ದಾರೆ.

**<><*<><>*><>**

ಸಂಕ್ಷಿಪ್ತ ಸುದ್ದಿಗಳು

೧. ಬೆಳಗಾವಿ ಜಿಲ್ಲೆಯಲ್ಲಿ ಜಲಜೀವನ ಮಿಷನ್ ಅನುಷ್ಠಾನ, ಶಾಲಾ ಮಕ್ಕಳಿಗೆ ಮೊಟ್ಟೆ ಹಾಗೂ ಬಾಳೆಹಣ್ಣು ವಿತರಣೆ, ಸೇರಿದಂತೆ ಪ್ರತಿಯೊಂದು ಯೋಜನೆ ಕಾರ್ಯಕ್ರಮಗಳ ಅನುಷ್ಠಾನದ ಬಳಿಕ ಅದರ ಸಾಧಕ-ಬಾಧಕಗಳು ಕುರಿತು ಅಧಿಕಾರಿಗಳು ಕಡ್ಡಾಯವಾಗಿ ವಿಶ್ಲೇಷಣೆ ಮಾಡಬೇಕು ಎಂದು ಬೆಳಗಾವಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ವಿಪುಲ್ ಬನ್ಸಾಲ್ ನಿರ್ದೇಶನ ನೀಡಿದ್ದಾರೆ.

೧.	ಬೆಂಗಳೂರು-ದಾನಾಪುರ ಸಂಘಮಿತ್ರ ಡೈಲಿ ಎಕ್ಸ್ ಪ್ರೆಸ್ ರೈಲಿಗೆ ರಾಮಗುಂಡಂ ನಿಲ್ದಾಣದಲ್ಲಿ ಒದಗಿಸಲಾಗಿರುವ ತಾತ್ಕಾಲಿಕ ನಿಲುಗಡೆಯನ್ನು ಇಂದಿನಿಂದ ಜಾರಿಗೆ ಬರುವಂತೆ ಆರು ತಿಂಗಳ ಅವಧಿ ಮುಂದುವರಿಸಲು ದಕ್ಷಿಣ ಮಧ್ಯ ರೈಲ್ವೆ ನಿರ್ಧರಿಸಿದೆ ಎಂದು ನೈಋತ್ಯ ರೈಲ್ವೆ ತಿಳಿಸಿದೆ.

೩.	ಬಿಬಿಎಂಪಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ, ಅಧ್ಯಕ್ಷ ಜಿ.ಕೃಷ್ಣಪ್ಪ ಬೆಂಗಳೂರು ದಕ್ಷಿಣ ವಿಧಾನ ಸಭಾ ಕ್ಷೇತ್ರದ ಕಛೇರಿಯಲ್ಲಿ ಪರಿವೀಕ್ಷಣೆ ಕಾರ್ಯಕ್ರಮ ಕೈಗೊಂಡು, ಗ್ಯಾರಂಟಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನದ ಬಗ್ಗೆ ಚರ್ಚಿಸಿದರು.

೪.	ವಿಜಯನಗರ ಜಿಲ್ಲೆಯಲ್ಲಿ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯ ಸ್ಥಿರಾಸ್ಥಿಗಳ ನೋಂದಣಿಯನ್ನು ಇ-ಆಸ್ತಿ ತಂತ್ರಾಂಶದಿಂದ ನೋಂದಾಯಿಸಲು ಇ-ಆಸ್ತಿ ತಂತ್ರಾಂಶವನ್ನು ಕಾವೇರಿ-೨ ತಂತ್ರಾಂಶದೊಂದಿಗೆ ಸಂಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ್ ತಿಳಿಸಿದ್ದಾರೆ.

೫.	ರಾಷ್ಟ್ರೀಕೃತ ಬ್ಯಾಂಕ್‌ನಿಂದ ಮಾತ್ರ ಸಾಲ ಪಡೆದುಕೊಳ್ಳಬೇಕು, ಸಣ್ಣ ಹಣಕಾಸು ಸಂಸ್ಥೆಗಳಿಂದ ದೂರವಿರುವಂತೆ ಮಂಡ್ಯ ಜಿಲ್ಲಾಧಿಕಾರಿ ಕುಮಾರ ತಿಳಿಸಿದ್ದಾರೆ. ಸಣ್ಣ ಹಣಕಾಸು ಸಂಸ್ಥೆಗಳು ಆರ್‌ಬಿಐನ ನಿಯಮನುಸಾರ ಸಾಲ ಹಿಂಪಡೆಯಬೇಕು ಎಂದು ಅವರು ಸೂಚಿಸಿದ್ದಾರೆ.

೬.	ಕೋಲಾರ ಜಿಲ್ಲೆಯ ಅಭಿವೃದ್ಧಿಯ ದೃಷ್ಟಿಯಿಂದ ಕುಡಿಯುವ ನೀರಿಗಾಗಿ ಜಾರಿಯಾಗಿರುವ ಎತ್ತಿಹೊಳೆ ಯೋಜನೆಯನ್ನು ಪೂರ್ಣಗೊಳಿಸಬೇಕು ಎಂದು ಒತ್ತಾಯಿಸಿ ಶಾಸಕ ಕೊತ್ತೂರು ಮಂಜುನಾಥ್ ನೇತೃತ್ವದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಲಾಯಿತು.

೭.	ಜಲ ನಿರ್ವಹಣೆ, ಜಲ ಭದ್ರತಾ ಯೋಜನೆ ಸಿದ್ಧಪಡಿಸುವ ಕುರಿತು  ರೈತರಿಗೆ ಒಂದು ದಿನದ ತರಬೇತಿ ಕಾರ್ಯಗಾರ ಹಮ್ಮಿಕೊಳ್ಳಲಾಗಿದೆ ಎಂದು ಕಂಪ್ಲಿಯ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ನಿರ್ದೇಶಕಿ ಸಿ.ಆರ್.ಅಭಿಲಾಷ  ವಿಜಯನಗರದಲ್ಲಿಂದು ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**